ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ನಿರ್ದೇಶಕರ ಕಛೇರಿ, 6ನೇ ಮಹಡಿ,
ಕೆ.ಹೆಚ್.ಬಿ. ಕಾಂಪ್ಲೆಕ್ಸ್, ಕಾವೇರಿ ಭವನ,
ಕೆ.ಜಿ.ರೋಡ್, ಬೆಂಗಳೂರು-560009.

**ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ನೇಮಕಾತಿ ಸಮಿತಿ, ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಕಾವೇರಿ ಭವನ, 6ನೇ ಮಹಡಿ, ಕೆ.ಜಿ. ರಸ್ತೆ, ಬೆಂಗಳೂರು – 560 009**

**ಅಧಿಸೂಚನೆ**

**ಸಂಖ್ಯೆ: ಸಂಖ್ಯೆ:ಡಿಪಿಎನ್:ನೇಸ:09:2019–20**
**ಬೆಂಗಳೂರು, ದಿನಾಂಕ: 8 :10:2021**

ಈ ಕಛೇರಿಯ ಅಧಿಸೂಚನೆ ಸಂಖ್ಯೆ:ಡಿಪಿಎನ್:ನೇಸ:09:2019–20, ದಿನಾಂಕ: 26.11.2019ರಲ್ಲಿ 100+24= 124ರ ಜೊತೆಗೆ 81 ಹುದ್ದೆಗಳನ್ನು ಸೇರ್ಪಡೆಗೊಳಿಸಿ, ಖಾಲಿ ಇರುವ ಒಟ್ಟು 205 ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಈ ಸಂಬಂಧದಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ದಿನಾಂಕ: 28.03.2021ರಂದು ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಪ್ರಾಥಮಿಕ ಪರೀಕ್ಷೆಯನ್ನು ನಡೆಸಿರುತ್ತದೆ. ದಿನಾಂಕ: 29.06.2021ರಂದು ಪೂರ್ವಭಾವಿ ಪರೀಕ್ಷೆಗೆ ಹಾಜರಾದ ಎಲ್ಲಾ ಅಭ್ಯರ್ಥಿಗಳ ಅರ್ಜಿ ಸಂಖ್ಯೆ, ನೋಂದಣಿ ಸಂಖ್ಯೆ ಹಾಗೂ ಅವರುಗಳು ಗಳಿಸಿರುವ ವಿಷಯವಾರು ಅಂಕಗಳ ಫಲಿತಾಂಶವನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿರುತ್ತದೆ.

ನೇಮಕಾತಿ ಸಮಿತಿ ಸಭೆಯ ನಿರ್ಣಯದಂತೆ ಪೂರ್ವಭಾವಿ ಪರೀಕ್ಷೆಗೆ ಹಾಜರಾದ ಅಭ್ಯರ್ಥಿಗಳ ಪ್ರವರ್ಗಗಳಿಗೆ ಅನುಸಾರವಾಗಿ 1:10ರ ಅನುಪಾತದಲ್ಲಿ ಮುಖ್ಯ ಪರೀಕ್ಷೆಗೆ ಅರ್ಹರಾಗುವ ಅಭ್ಯರ್ಥಿಗಳ ಪಟ್ಟಿಯನ್ನು ತಯಾರಿಸಿಕೊಡುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ದಿನಾಂಕ: 05.07.2021ರಂದು ಸಮಿತಿಯ ಸದಸ್ಯ ಕಾರ್ಯದರ್ಶಿಯವರು ಪತ್ರ ಸಲ್ಲಿಸಿದ್ದು, ಕರ್ನಾಟಕ ಪರೀಕ್ಷಾ ಪ್ರಾಧಿಕಾರದವರು ದಿನಾಂಕ: 30.09.2021ರಂದು ಅಭ್ಯರ್ಥಿಗಳು ಪ್ರಾಥಮಿಕ ಪರೀಕ್ಷೆಯಲ್ಲಿ ಪಡೆದ ಅಂಕಗಳ ಆಧಾರದ ಮೇಲೆ ಮುಖ್ಯ ಪರೀಕ್ಷೆಗೆ ಅರ್ಹರಾಗುವ ಅಭ್ಯರ್ಥಿಗಳ ಪಟ್ಟಿಯನ್ನು 1:10ರ ಅನುಪಾತದಲ್ಲಿ ತಯಾರಿಸಿಕೊಟ್ಟಿದ್ದು, ಅದನ್ನು ನೇಮಕಾತಿ ಸಮಿತಿಯು ಅನುಮೋದಿಸಿರುತ್ತದೆ.

ಈ ಹಿನ್ನೆಲೆಯಲ್ಲಿ ಮುಖ್ಯ ಪರೀಕ್ಷೆಗೆ ಅರ್ಹರಾಗಿರುವ ಅಭ್ಯರ್ಥಿಗಳ ಪಟ್ಟಿ ಪುಟ ಸಂಖ್ಯೆ: 01 ರಿಂದ 44, ಪ್ರಾರಂಭಿಕ ನೋಂದಣಿ ಸಂಖ್ಯೆ: FB067 ರಿಂದ ಕೊನೆಯ ನೋಂದಣಿ ಸಂಖ್ಯೆ: AC038 ರಲ್ಲಿ ಇರುವಂತಹ ಮಾಹಿತಿಯನ್ನು ಈ ಮೂಲಕ ಪ್ರಕಟಿಸಲಾಗಿದೆ. ಸರ್ಕಾರದ ಆದೇಶಾನುಸಾರ ಮುಖ್ಯ ಪರೀಕ್ಷೆಯ ಜವಾಬ್ದಾರಿಯನ್ನು ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ಯೂನಿವರ್ಸಿಟಿ, ನಾಗರಭಾವಿ, ಬೆಂಗಳೂರು, ಅವರಿಗೆ ವಹಿಸಿಕೊಡಲಾಗಿರುತ್ತದೆ. ಮುಖ್ಯ ಪರೀಕ್ಷೆಗೆ ಅರ್ಹರಾಗಿರುವ ಅಭ್ಯರ್ಥಿಗಳು ಪಾವತಿಸಬೇಕಾಗಿರುವ ಪರೀಕ್ಷಾ ಶುಲ್ಕದ ವಿವರ ಹಾಗೂ ಮುಖ್ಯ ಪರೀಕ್ಷಾ ದಿನಾಂಕದ ವಿವರಗಳನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು.

8/10/2021

( ಹೆಚ್.ಕೆ. ಜಗದೀಶ್ )
ನಿರ್ದೇಶಕರು(ಪ್ರ)
ಹಾಗೂ ನೇಮಕಾತಿ ಸಮಿತಿ ಸದಸ್ಯ ಕಾರ್ಯದರ್ಶಿಗಳು,
ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ
ಇಲಾಖೆ, ಬೆಂಗಳೂರು